# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 767

2) ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 22-02-2023

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಮೀನುಗಾರಿಕೆಗೆ ಉಪಯೋಗಿಸಿಕೊಳ್ಳುವಂತಹ ಎಷ್ಟು ನೀರಿನ ಕೆರೆಗಳಿವೆ; | ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಮೀನುಗಾರಿಕೆಗೆ ಉಪಯೋಗಿಸಿಕೊಳ್ಳುವಂತಹ ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 3910 ದೊಡ್ಡ ಕೆರೆಗಳು ಇರುತ್ತವೆ (40 ಹೆಕ್ಟೇರ್‌ಗಿಂತ ಹೆಚ್ಚಿನ ಅಚ್ಚುಕಟ್ಟು ಇರುವ ಕೆರೆಗಳು) ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 23767 ಸಣ್ಣ ಕೆರೆಗಳು ಇರುತ್ತವೆ (40 ಹೆಕ್ಟೇರ್‌ಗಿಂತ ಕಡಿಮೆ ಅಚ್ಚುಕಟ್ಟು ಇರುವ ಕೆರೆಗಳು). |
| ಆ) | ಹಲವಾರು ಪಟ್ಟಣಗಳಲ್ಲಿ ತೊಟ್ಟಿಗಳಲ್ಲಿ ಮೀನುಗಾರಿಕೆ ಮಾಡಲು ನಿಗದಿತ ಸಮಯದಲ್ಲಿ ಮೀನುಗಾರಿಕೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳುತ್ತಿಲ್ಲವೇಕೆ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಪ್ರತಿ ವರ್ಷದ ಜುಲೈ 1 ರಿಂದ ಮುಂದಿನ ವರ್ಷದ ಜೂನ್ 30 ರವರೆಗಿನ ಅವಧಿಯನ್ನು "ಮೀನುಗಾರಿಕೆ ವರ್ಷ" ವೆಂದು ಪರಿಗಣಿಸಲಾಗುತ್ತಿದೆ. ಗುತ್ತಿಗೆ ಮುಖಾಂತರವಾಗಲಿ ಅಥವಾ ಇ-ಟೆಂಡರ್ ಮುಖಾಂತರವಾಗಲಿ ನೀಡಲಾಗುವ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಗರಿಷ್ಟ 5 ವರ್ಷಗಳಿಗೆ ನೀಡಲಾಗುತ್ತಿದೆ. ಆದರೆ, ವೃತ್ತಿಪರ ಮೀನುಗಾರರ ಪರವಾನಗಿಗಳು ಆ ವರ್ಷದ ಮೀನುಗಾರಿಕೆ ವರ್ಷಕ್ಕೆ ಸೀಮಿತಗೊಳ್ಳುತ್ತವೆ. ಮೀನುಗಾರಿಕಾ ವರ್ಷದ ಮಧ್ಯಂತರದ ಯಾವುದೇ ಅವಧಿಯಲ್ಲಿ ಗುತ್ತಿಗೆ / ಪರವಾನಗಿ ನೀಡಲಾಗಿದ್ದರೂ ಸಹ, ಮೀನುಗಾರಿಕೆ ವರ್ಷದ ಅಂತ್ಯದಲ್ಲಿ ಗುತ್ತಿಗೆಯು ಕೊನೆಗೊಳ್ಳುತ್ತದೆ.<br><br>ಪ್ರಸ್ತುತ, ಗುತ್ತಿಗೆ ಕಾರ್ಯನೀತಿ 2014 ರಂತೆ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲಾಗುತ್ತಿದ್ದು, ಮೊದಲ ಆದ್ಯತೆಯನ್ನು ನೇರ ಗುತ್ತಿಗೆ ಮೂಲಕ ಮೀನುಗಾರರ ಸಹಕಾರ ಸಂಘಗಳಿಗೆ ನೀಡಲಾಗುತ್ತಿದೆ. ಜಲ ಸಂಪನ್ಮೂಲಗಳನ್ನು ಮೊದಲು ಅರ್ಹ ಮೀನುಗಾರರ ಸಹಕಾರ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಿ ನಿಯಮಾನುಸಾರ ಅರ್ಹತೆಯನ್ನು ಹೊಂದಿದ ಸಂಘಕ್ಕೆ ನೇರ ಗುತ್ತಿಗೆ ಮೂಲಕ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲಾಗುತ್ತಿದೆ. 2ನೇ ಆದ್ಯತೆಯಲ್ಲಿ ಮೀನುಗಾರರ ಉತ್ಪಾದಕರ ಸಂಸ್ಥೆಗಳಿಗೆ ನೇರ ಗುತ್ತಿಗೆ ಮೂಲಕ ಮೀನು ಪಾಶುವಾರು ಹಕ್ಕನ್ನು ನೀಡಲಾಗುತ್ತಿದೆ.<br><br>ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಮೂಲಕ ವಿಲೇವಾರಿ ಮಾಡುವಾಗ ಆಯಾ ತಾಲ್ಲೂಕಿನ ಪರಿಶಿಷ್ಟ ಜಾತಿ ಮೀನುಗಾರರಿಗೆ ಶೇ.17.15 ರಷ್ಟು ಹಾಗೂ ಪರಿಶಿಷ್ಟ ಪಂಗಡದ ಮೀನುಗಾರರಿಗೆ ಶೇ.6.95 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ. |

| | | |
|---|---|---|
| | | ಸಾಂಪ್ರದಾಯಿಕ ಮೀನುಗಾರರು / ವೃತ್ತಿಪರ ಮೀನುಗಾರರಿಗೂ ಅಥವಾ ಕ್ರೀಡಾ ಮೀನುಗಾರರು ನಿರ್ದಿಷ್ಟ ಮೊತ್ತವನ್ನು ಪಾವತಿಸಿ, ನಿಗಧಿತ ಅವಧಿಗೆ ಪರವಾನಗಿ ಮೂಲಕ ರಾಜ್ಯದ ಆಯ್ದ ಜಲಾಶಯಗಳಲ್ಲಿ ಮತ್ತು ನದಿ ಭಾಗಗಳಲ್ಲಿ ಮೀನು ಹಿಡಿಯಲು ಅವಕಾಶ ನೀಡಲಾಗುತ್ತಿದೆ. ವಿಶೇಷ ಕಾರಣಾಂತರಗಳಿಂದಾಗಿ, ಎಲ್ಲೆಲ್ಲಿ ಒಳನಾಡು ಕೆರೆಗಳ / ಜಲಾಶಯಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಇಲಾಖೆಯಿಂದ ನೇರ ಗುತ್ತಿಗೆ ಮುಖಾಂತರವಾಗಲೀ ಅಥವಾ ಇ-ಟೆಂಡರ್ ಮುಖಾಂತರವಾಗಲೀ ವಿಲೇವಾರಿ ಮಾಡಲು ಸಾಧ್ಯವಾಗದಿದ್ದ ಪಕ್ಷದಲ್ಲಿ, ಅಂತಹ ಜಲಸಂಪನ್ಮೂಲಗಳಲ್ಲಿನ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ನಿರ್ದೇಶಕರ ಅನುಮತಿಯ ಮೇರೆಗೆ ಸ್ಥಳೀಯ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮೀನುಗಾರರಿಗೆ ಮೀನು ಹಿಡಿಯಲು ಅವಕಾಶ ನೀಡಲಾಗುತ್ತಿದೆ.<br><br>ಒಳನಾಡು ಮೀನುಗಾರಿಕೆ ಕಾರ್ಯನೀತಿ ಆದೇಶದ ಪ್ರಕಾರ ಆಸಕ್ತ ಮೀನುಗಾರರ ಸಹಕಾರ ಸಂಘಗಳಿಂದ ಅರ್ಜಿಯನ್ನು ಆಹ್ವಾನಿಸಿ ಗುತ್ತಿಗೆ ಪ್ರಕ್ರಿಯೆಯನ್ನು ಕೆರೆಗಳ ಮೀನು ಪಾಶುವಾರು ಹಕ್ಕನ್ನು ವರ್ಷದ ಮೇ ತಿಂಗಳಿನಲ್ಲಿ ಪ್ರಾರಂಭಿಸಲಾಗುವುದು. ನಂತರ ನೀರು ತುಂಬಿದ ಒಳನಾಡು ಜಲಸಂಪನ್ಮೂಲಗಳ ಸರ್ವೇಕ್ಷಣೆಯನ್ನು ನಡೆಸಿ ಅವುಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿಯನ್ನು ಸಾರ್ವಜನಿಕವಾಗಿ ಇ-ಟೆಂಡರ್ ಮೂಲಕ ಮೊದಲನೇ ಸುತ್ತಿನಲ್ಲಿ ಮೇ-ಜೂನ್ ತಿಂಗಳಿನಲ್ಲಿ, ಎರಡನೇ ಸುತ್ತನ್ನು ಜುಲೈ-ಆಗಸ್ಟ ತಿಂಗಳಿನಲ್ಲಿ ಮತ್ತು ಮೂರನೇ ಸುತ್ತನ್ನು ಸೆಪ್ಟೆಂಬರ್-ಅಕ್ಟೋಬರ್ ತಿಂಗಳಿನಲ್ಲಿ ನಡೆಸಲಾಗುವುದು.<br><br>ಆದರೆ, ಬಹುತೇಕ ಕೆರೆಗಳು ಮಳೆಯಾಶ್ರಿತವಾಗಿದ್ದು, ಕೆಲವೊಮ್ಮೆ ಕೆರೆಗಳಿಗೆ ನೀರು ಬರುವುದು ತಡವಾಗುವಂತಹ ಸಂದರ್ಭದಲ್ಲಿ ನಿಗದಿತ ಸಮಯದಲ್ಲಿ ಟೆಂಡರ್ ಪ್ರಕ್ರಿಯೆಗಳು ಪೂರ್ಣಗೊಳ್ಳುವುದಿಲ್ಲ. ಪ್ರಸ್ತುತ ಸಾಲಿನಿಂದ ಇ-ಟೆಂಡರ್ ಮೂಲಕ ಕೆರೆಗಳನ್ನು ವಿಲೇವಾರಿ ಮಾಡಲಾಗುತ್ತಿದ್ದು, ಪಾರದರ್ಶಕವಾಗಿ ಮತ್ತು ನಿಗದಿತ ಸಮಯದಲ್ಲಿ ಇ-ಟೆಂಡರ್ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗಿದೆ. |
| ಇ) | ರಾಜ್ಯದಲ್ಲಿ ಒಳನಾಡು ಮೀನುಗಾರಿಕೆ ನೀತಿಯಿದೆಯೇ; ಹಾಗಿದ್ದಲ್ಲಿ ಯಾವ ವರ್ಷದಲ್ಲಿ ಒಳನಾಡು ನೀತಿಯನ್ನು ಸಿದ್ಧ ಪಡಿಸಲಾಗಿತ್ತು ಮತ್ತು ಯಾವ ಸಾಲಿನಿಂದ ಇದನ್ನು ಅನುಷ್ಠಾನ ಗೊಳಿಸಲಾಗಿದೆ; | ರಾಜ್ಯದಲ್ಲಿ ಒಳನಾಡು ಮೀನುಗಾರಿಕೆ ಕಾರ್ಯನೀತಿ-2014 ಜಾರಿಯಲ್ಲಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/125/ ಮೀಇಇ/2013 ದಿನಾಂಕ: 21-02-2014 ರಲ್ಲಿ ಗುತ್ತಿಗೆ ಕಾರ್ಯನೀತಿಯ ರೂಪು ರೇಷೆಗಳನ್ನು ಸಿದ್ಧಪಡಿಸಲಾಗಿದೆ. ಮತ್ತು ಸದರಿ ಮಾರ್ಗಸೂಚಿಗಳನ್ನು ದಿನಾಂಕ: 21-02-2014 ರಿಂದ ಅನುಷ್ಠಾನಗೊಳಿಸಲಾಗಿದೆ. |

| | | |
|---|---|---|
| ಈ) | ಮೀನುಗಾರಿಕೆ ಇಲಾಖೆಯಲ್ಲಿ ಉತ್ತಮ ಆಡಳಿತಕ್ಕಾಗಿ ನೂತನ ತಂತ್ರಜ್ಞಾನ ಬಳಸಿ ಕೊಳ್ಳಲಾಗುತ್ತಿದೆಯೇ; ಎಂಡ್ ಟು ಎಂಡ್ ಆನ್-ಲೈನ್ ವಿತರಣಾ ವ್ಯವಸ್ಥೆಯನ್ನು ಎಷ್ಟು ಪ್ರತಿಶತ ಅಳವಡಿಸಿ ಕೊಳ್ಳಲಾಗಿದೆ; | ಮೀನುಗಾರಿಕೆ ಇಲಾಖೆಯಲ್ಲಿ ಉತ್ತಮ ಆಡಳಿತಕ್ಕಾಗಿ E-Governance ಒಳಗೊಂಡಂತೆ ನೂತನ ತಂತ್ರಜ್ಞಾನ ಬಳಸಿಕೊಳ್ಳಲಾಗುತ್ತಿದೆ. ಇಲಾಖೆಯಲ್ಲಿ ಇ-ಆಡಳಿತದಲ್ಲಿ ಕೆಲವು ತಂತ್ರಾಂಶಗಳಾದ ಸೇವಾಸಿಂಧು, ಸಕಾಲ, E-OFFICE, FRIMS (Fisheries Resource Information Management System) DBT (Direct Benefit Transfer), PFMS (Public Financial Management system), FRUITS (Farmer Registration and Unified Beneficiary Information system) ಗಳನ್ನು ಅಳವಡಿಸಿಕೊಂಡು ಬಳಸಲಾಗುತ್ತಿದೆ.<br><br>ಫಲಾನುಭವಿಗೆ ನೀಡಬೇಕಾದ ಸಹಾಯಧನವನ್ನು Online / End to End ಮುಖಾಂತರ 100% ನೀಡಲಾಗುತ್ತಿದೆ. ಮೀನುಗಾರರಿಗೆ ಸೌಲಭ್ಯ ನೀಡುವ ಕಾರ್ಯಕ್ರಮಗಳಿಗೆ ಕೆ.ಟಿ.ಪಿ.ಪಿ. ಕಾಯ್ದೆಯನ್ನು ಅನುಸರಿಸಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಉ) | ರಾಜ್ಯದಲ್ಲಿ ಮೀನುಗಾರಿಕೆಗೆ ಒದಗಿಸಲಾಗುತ್ತಿರುವ ಸೌಲಭ್ಯ / ಸೇವೆಗಳು ಯಾವುವು? | ರಾಜ್ಯದಲ್ಲಿ ಮೀನುಗಾರಿಕೆಗೆ ಒದಗಿಸಲಾಗುತ್ತಿರುವ ಸೌಲಭ್ಯ / ಸೇವೆಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಪಸಂಮೀ ಇ-48 ಮೀಇಯೋ 2023

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

# ಅನುಬಂಧ-1

## ಮೀನುಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳ ವಿವರ

**1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/– ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/– ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 400 ಘಟಕಗಳಿಗೆ ಸಹಾಯಧನ ನೀಡುವ ಉದ್ದೇಶದಿಂದ 2 ಕೋಟಿ ರೂ.ಗಳನ್ನು ನೀಡಲಾಗಿದೆ.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್‌ಗೆ ರೂ.2.50ಲಕ್ಷ ಸಹಾಯಧನ ನೀಡಲಾಗುವುದು.

2. "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ"

ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆದಾಯ ತರುವ ದೃಷ್ಟಿಯಿಂದ ಮತ್ತು ಗ್ರಾಮ ಪಂಚಾಯಿತಿಗಳನ್ನು ಬಲಪಡಿಸುವ ಉದ್ದೇಶದಿಂದ ಆಯ್ದ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತೀ ಕೆರೆಯ ಜಲವಿಸ್ತೀರ್ಣಕ್ಕನುಗುಣವಾಗಿ ಗರಿಷ್ಠ ರೂ.10,000/– ಮೌಲ್ಯದ ಬಲಿತ ಬಿತ್ತನೆ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನು ಕೃಷಿಯನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಮೀನು ಕೃಷಿಯನ್ನು ಅಭಿವೃದ್ಧಿಪಡಿಸಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ" ಯೋಜನೆಯಡಿ ರೂ. 5.65 ಕೋಟಿ ವೆಚ್ಚದಲ್ಲಿ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಮೀನುಮರಿಗಳನ್ನು ಬಿತ್ತನೆ ಮಾಡಲಾಗುವುದು.

**3. ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ**

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

**4. ನೀಲಿ ಕ್ರಾಂತಿ/ PMMSY – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ)**

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ

ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

5. **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ**

ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಸೇರಿದ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆಗೆ ಅವಕಾಶ ಮಾಡಲಾಗಿದೆ.

6. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :**

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

7. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

8. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ**

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸೆಲ್ ಡೆಲಿವರಿ ಪಾಯಿಂಟ್ ನಲ್ಲಿಯೇ ಕರರಹಿತ ದರದಲ್ಲಿ ವಿತರಿಸಲಾಗುತ್ತಿದೆ.

9. **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ**

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು.

10. **ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

11. **ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

**ಆ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 79000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿ, ದೆಹಲಿಗೆ ಬಿಡುಗಡೆ ಮಾಡಲಾಗುವುದು.

**12. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು**

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ.

**<u>4405-ಬಂಡವಾಳ ಹೂಡಿಕೆಗಳು</u>**

**13. ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

**14. ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

**15. ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ

ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

**ಜಿಲ್ಲಾ ಪಂಚಾಯತ್ ಯೋಜನೆಗಳು**

**1. ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

**2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

4. **ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.